


ಬೆಳಗಾವಿ ಚೆನ್ನಮ್ಮ ವೃತ್ತದ ಬಳಿ ಕಾಂಗ್ರೆಸ್ ಮುಖಂಡರಿಂದ ಪ್ರತಿಭಟನೆ. ಬರ ಪರಿಹಾರ ನೀಡದ ಕೆಂದ್ರ ಸರಕಾರದ ವಿರುದ್ಧ ಪ್ರತಿಭಟನೆ. ಕಾಂಗ್ರೆಸ್ ಗ್ರಾಮೀಣ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ ನೇತೃತ್ವದಲ್ಲಿ ಪ್ರತಿಭಟನೆ. ಕೇಂದ್ರ ಬಿಜೆಪಿ ಸರಕಾರಕ್ಕೆ 22 ಪ್ರಶ್ನೆಗಳಿಗೆ ಉತ್ತರಿಸುವಂತೆ ಆಗ್ರಹ. 17,901 ಕೋಟಿ ಪರಿಹಾರ ನೀಡುವಂತೆ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ರಾಜ್ಯದ 223 ತಾಲೂಕುಗಳು ಬರಪೀಡಿತವಾಗಿದ್ದು 33,770 ಕೋಟಿ ನಷ್ಟವಾಗಿದೆ ಎಂದು ಅಕ್ರೋಶ. ಪರಿಹಾರ ನೀಡಿಲ್ಲಾ ಎಂದು ಕೇಂದ್ರ ಸರಕಾರದ ವಿರುದ್ಧ ಘೋಷಣೆ ಕೂಗಿ ಅಕ್ರೋಶ. 22 ಪ್ರಶ್ನೆಗಳಿಗೆ ಉತ್ತರ ಕೊಡಿ ಮೋದಿ ಎಂದು ಪ್ರತಿಭಟನೆ. ಕಾಂಗ್ರೆಸ್ ಮುಖಂಡರು ಎಲ್ಲರೂ ಉಪಸ್ಥಿತರಿದ್ದರು

# ಎಸ್,ಎಸ್,ಎಲ್.ಸಿ ಪರೀಕ್ಷೆ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

ಗದಗ ಏಪ್ರಿಲ್ : ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಮಾರ್ಚ/ ಏಪ್ರಿಲ್-2024 ರ ಮಾಹೆಯಲ್ಲಿ ನಡೆಸಿದ ಎಸ್.ಎಸ್.ಎಲ್.ಸಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವು ಏಪ್ರಿಲ್ 15 ರಿಂದ ಏಪ್ರಿಲ್ 29 ರವರೆಗೆ ಜಿಲ್ಲೆಯ 6 ಮೌಲ್ಯಮಾಪನ ಕೇಂದ್ರಗಳಲ್ಲಿ ನಡೆಯಲಿದೆ.

ಈ ಪರೀಕ್ಷಾ ಮೌಲ್ಯಮಾಪನ ಕಾರ್ಯವು ಸುಗಮವಾಗಿ ಜರುಗಲು ಮತ್ತು ಶಿಸ್ತು, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಮೌಲ್ಯಮಾಪನ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಏಪ್ರಿಲ್ 15 ರಿಂದ ಏಪ್ರಿಲ್ 29 ರವರೆಗೆ ಪ್ರತಿಬಂಧಕಾಜ್ಞೆ ಜಾರಿ ಮಾಡಲಾಗಿದೆ. ಈ ಅವಧಿಯಲ್ಲಿ ಮೌಲ್ಯಮಾಪನ ಕಾರ್ಯಗಳಿಗಾಗಿ ನೇಮಿಸಲಾದ ಸಿಬ್ಬಂದಿಯ ಹೊರತಾಗಿ ಬೇರೆ ಯಾವುದೇ ಅನಧಿಕೃತ ವ್ಯಕ್ತಿಗಳ ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಆದೇಶಿಸಿದ್ದಾರೆ.

ಜಿಲ್ಲೆಯಲ್ಲಿ 6 ಎಸ್.ಎಸ್.ಎಲ್.ಸಿ. ಮೌಲ್ಯಮಾಪನ ಕೇಂದ್ರಗಳ ವಿವರ ಇಂತಿದೆ : ಗದಗ-ಬೆಟಗೇರಿಯ ಸೇಂಟ್ ಜಾನ್ ಪ್ರೌಢಶಾಲೆ, ಪಾಲಾ ಬಾದಾಮಿ ರಸ್ತೆಯಲ್ಲಿನ ಲೊಯೋಲಾ ಪ್ರೌಢಶಾಲೆ, ಒಕ್ಕಲಗೇರಿಯ ಸಿ.ಡಿ.ಓ ಜೈನ್ ಆಂಗ್ಲ ಮಾಧ್ಯಮ ಶಾಲೆ, ಕನಕ ಭವನದ ಹತ್ತಿರ ಶ್ರೀ ಮಹಾವೀರ ಜೈನ್ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಭೂಮರಡ್ಡಿ ವೃತ್ತ ಹತ್ತಿರದ ಜಗದ್ಗುರು ತೋಂಟದಾರ್ಯ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಸಿದ್ಧಲಿಂಗ ನಗರದ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆ.

# ಸತ್ತಿಗೇರಿಯಲ್ಲಿ ಒಂಭತ್ತು ದಿನಗಳ ಗ್ರಾಮದೇವಿ ಜಾತ್ರಾ ಮಹೋತ್ಸವಕ್ಕೆ ವಿದ್ಯುಕ್ತವಾಗಿ ಚಾಲನೆ

ಯರಗಟ್ಟಿ: ಸಮೀಪದ ಸತ್ತಿಗೇರಿ ಗ್ರಾಮದಲ್ಲಿ ಶನಿವಾರದಿಂದ ಒಂಭತ್ತು ದಿನಗಳ ಕಾಲ ಜರುಗಲಿರುವ ಗ್ರಾಮದೇವತೆಯ ಜಾತ್ರಾ ಮಹೋತ್ಸವಕ್ಕೆ ವಿದ್ಯುಕ್ತವಾಗಿ ಚಾಲನೆ ದೊರೆಯಿತು. ಶನಿವಾರ ನಸುಕಿನ ಜಾವದ ಬ್ರಾಹ್ಮ ಮುಹೂರ್ತದಲ್ಲಿ ಜರುಗಿದ ದೇವಿಯ ವಿವಾಹ ಮಹೋತ್ಸವದಲ್ಲಿ ಸಾವಿರಾರು ಸಂಖ್ಯೆಯಲ್ಲಿ ದೇವಿಯ ಭಕ್ತರ ದಂಡು ಗ್ರಾಮದಲ್ಲಿ ನೆರೆದಿತ್ತು.





ದ್ಯಾಮವ್ವ ಮಾತಾ ಕೀ ಜೈ, ದುರ್ಗಮ್ಮ ದೇವಿ ಕೀ ಜೈ.... ಎಂಬ ಭಕ್ತರ ಉದ್ಘೋಷದೊಡನೆ ದೇವಿಯನ್ನು ತಲೆಯ ಮೇಲೆ ಹೊತ್ತ ದೇವದಾಸಿಯುರ ಆವೇಶಭರಿತ ನರ್ತನ , ಡೊಳ್ಳು ಕುಣಿತ, ಚಂಡೆ ವಾದನ, ಪಂಚವಾದ್ಯ, ಸುಹಾಸಿನಿಯರ ಪೂರ್ಣಕುಂಭ ಮೆರವಣಿಗೆ ಮುಂತಾದವು ಜಾತ್ರಾ ಮಹೋತ್ಸವಕ್ಕೆ ಮೆರಗು ನೀಡಿದವು.ಐದು ವರ್ಷಕ್ಕೊಮ್ಮೆ ನಡೆಯುವ ಈ ಜಾತ್ರಾ ಮಹೋತ್ಸವ 9 ದಿನಗಳವರೆಗೆ ನಡೆಯಲಿದೆ. ದೇವಿಗೆ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ವಿಶೇಷ ಪೂಜೆ ಸಲ್ಲಿಸಿದ ಗ್ರಾಮದೇವಿ ದೇವಸ್ಥಾನಕ್ಕೆ ಆಗಮಿಸಿದ ಮೇಲೆ ಭಕ್ತರು ದೇವಿಯರನ್ನು ತಲೆಯ ಮೇಲೆ ಹೊತ್ತು ಜಾತ್ರಾ ಗದ್ದುಗೆಗೆ ತೆರಳಿದರು. ಗ್ರಾಮದಲ್ಲಿ ಜಾತ್ರೆಯ ಸಂಭ್ರಮ ಸಡಗರ ಮನೆಮಾಡಿದೆ.

# ಜಿಲ್ಲಾಧಿಕಾರಿಗಳ ನಿರ್ದೇಶನದಲ್ಲಿ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ

ಧಾರವಾಡ ಏ.: ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ನಿರ್ದೇಶನದ ಮೇರೆಗೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯು ಇಂದು (ಏ.12) ಸಂಜೆ ಅಪರ ಜಿಲ್ಲಾಧಿಕಾರಿಗಳ ಉಪಸ್ಥಿತಿ ಯಲ್ಲಿ, ಡಿಸಿ ಕಚೇರಿಯಲ್ಲಿ ಜರುಗಿತು. ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಅವರು ಮಾತನಾಡಿ,



ಕಳೆದ ಏ.10 ರಿಂದ ಧಾರವಾಡ ತಾಲೂಕಿನ ನಿಗದಿ ಗ್ರಾಮ ಪಂಚಾಯತ ವ್ಯಾಪ್ತಿಯ ಬೆನಕನಕಟ್ಟಿ ಗ್ರಾಮ ಹಾಗೂ ರಾಮಾಪೂರ ಗ್ರಾಮ ಪಂಚಾಯತಿಯ ರಾಮಾಪೂರ ಗ್ರಾಮಕ್ಕೆ ಖಾಸಗಿ ಕೊಳವೆಬಾವಿಗಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಕಲಘಟಗಿ ತಾಲೂಕಿನ ತಾವರಗೇರೆ ಗ್ರಾಮದಲ್ಲಿ ಮತ್ತು ಬೇಗೂರ ಗ್ರಾಮದಲ್ಲಿ ನೀರು ಪೂರೈಕೆಗೆ ಬಾಡಿಗೆ ಆದಾರದಲ್ಲಿ ಪಡೆದಿರುವ ಖಾಸಗಿ ಬೋರವೆಲ್ ಗಳಿಗೆ ಪೈಪ್ ಲೈನ್ ಅಳವಡಿಕೆಗೆ ಜಿಲ್ಲಾಧಿಕಾರಿಗಳ ಅನುಮೋದನೆ ಮೇರೆಗೆ ಕ್ರಮವಹಿಸಲಾಗುವುದು ಎಂದು ಅವರು ಹೇಳಿದರು.

ಧಾರವಾಡ ಜಿಲ್ಲೆಯಲ್ಲಿ ಮುಂದಿನ 7 ವಾರಗಳಿಗೆ ಆಗುವಷ್ಟು ಮೇವು ದಾಸ್ತಾನು ಲಭ್ಯವಿದೆ. ಕಲಘಟಗಿ, ಕುಂದಗೋಳ ಮತ್ತು ಧಾರವಾಡ ತಾಲೂಕಿನ ಕೆಲವು ಹೋಬಳಿಗಳಲ್ಲಿ ರೈತರಿಂದ ಮೇವು ಬೇಡಿಕೆ ಇದ್ದು, ಈಗಾಗಲೇ ಧಾರವಾಡ ಎಪಿಎಂಸಿಯಿಂದ 19 ಜನ ರೈತರಿಂದ 27.78 ಟನ್ ಹಾಗೂ ಕಲಘಟಗಿ ಎಪಿಎಂಸಿಯಿಂದ 35 ಜನ ರೈತರು 23.14 ಟನ್ ಮೇವು ಖರೀದಿಸಿದ್ದಾರೆ.

ಹುಬ್ಬಳ್ಳಿ ಶೇರೆವಾಡ ಮೇವು ಬ್ಯಾಂಕ್ ದಿಂದ 5 ಜನ ರೈತರು 1.92 ಟನ್, ಶಿರಗುಪ್ಪಿ ಮೇವು ಬ್ಯಾಂಕ್ ದಿಂದ 3 ಜನ ರೈತರು 7.35 ಟನ್, ಕುಂದಗೋಳ ಎಪಿಎಂಸಿಯಿಂದ 4 ಜನ ರೈತರು 3.6 ಟನ್ ಮೇವು ಖರೀದಿಸಿದ್ದಾರೆ.

ಕಲಘಟಗಿ ಮತ್ತು ಧಾರವಾಡ ತಹಸಿಲ್ದಾರ ಅವರು ಇನ್ನು ಹೆಚ್ಚಿನ ಮೇವು ಪೂರೈಸಲು ಪ್ರಸ್ತಾವನೆ ಸಲ್ಲಿಸಿದ್ದು, ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಕ್ರಮವಹಿಸಲಾಗಿದೆ ಎಂದು ಅವರು ಹೇಳಿದರು. ಜಿಲ್ಲೆಯಲ್ಲಿ ಆರಂಭಿಸಿರುವ ಎಲ್ಲ ಮೇವು ಬ್ಯಾಂಕ್ ಗಳಿಂದ ಇಲ್ಲಿವರೆಗೆ ರೈತರು, 75.25 ಟನ್ ಮೇವು ಖರೀದಿಸಿದ್ದಾರೆ. ಮತ್ತು 33.35 ಟನ್ ಮೇವು ದಾಸ್ತಾನು ಲಭ್ಯವಿದೆ ಎಂದು ಅವರು ಹೇಳಿದರು.

ಮುಂಗಾರುವ ಮಳೆ ಜಿಲ್ಲೆಯಲ್ಲಿ ಆರಂಭವಾಗಿದ್ದು, ಕಳೆದ ಮೂರನಾಲ್ಕುದಿನಗಳಲ್ಲಿ ಕಲಘಟಗಿ ಮತ್ತು ಹುಬ್ಬಳ್ಳಿ ತಾಲೂಕಿನ ಕೆಲವು ಭಾಗದಲ್ಲಿ ವಾಡಿಕೆಗಿಂತ ಹೆಚ್ಚು ಮಳೆ ದಾಖಲಾಗಿದೆ. ಉಳಿದಂತೆ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಚದುರಿದಂತೆ ಅಲ್ಪ ಪ್ರಮಾಣದ ಮಳೆ ದಾಖಲಾಗಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಮಳೆ ಆಗುವ ಮೂನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಅವರು ಸಭೆಯಲ್ಲಿ ತಿಳಿಸಿದರು.

ಜಿಲ್ಲಾಮಟ್ಟದ ಅಧಿಕಾರಿಗಳು ಕ್ಷೇತ್ರಮಟ್ಟದ ಅಧಿಕಾರಿ ಮತ್ತು ಸಿಬ್ಬಂದಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಕುಡಿಯುವ ನೀರು, ಜಾನುವಾರು ಮೇವು ಕೊರತೆ ಆಗದಂತೆ ಜಾಗೃತಿವಹಿಸಬೇಕೆಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಅಧೀಕ್ಷಕ ಅಭಿಯಂತರ ತಿಮ್ಮಪ್ಪ, ಜಿಲ್ಲಾ ನಗರಾಭಿವೃದ್ಧಿಕೋಶದ ಯೋಜನಾ ನಿರ್ದೇಶಕ ರಮೇಶ ಬಿ.ಎಸ್. , ಹೆಸ್ಕಾಂ ಕಾರ್ಯಪಾಲಕ ಅಭಿಯಂತರ ಎಂ.ಎಂ.ನಧಾಪ್, ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಡಾ.ರವಿ.ಸಾಲಿಗೌಡರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಆರ್.ಎಂ.ಸೋಪ್ಪಿಮಠ, ಮಲಪ್ರಭಾ ಬಲದಂಡೆ ಕಾಲುವೆ ನಿರ್ವಹಣಾ ವಿಭಾಗದ ಇಂಜನೀಯರ ಸೇರಿದಂತೆ ಇತರ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು. ಮತ್ತು ಎಸಿ, ಎಲ್ಲ ತಾಲೂಕುಗಳ ತಹಸಿಲ್ದಾರರು, ತಾಲೂಕು ಪಂಚಾಯತ ಇಓ ಗಳು ಆನ್ ಲೈನ್ ವಿಡಿಯೋ ಸಂವಾದದ ಮೂಲಕ ಸಭೆಗೆ ಹಾಜರಾಗಿದ್ದರು.

# ಮೋದಿ ಕಾರ್ಯಕ್ರಮಕ್ಕೆ ಸಂಸದ ವಿ.ಶ್ರೀನಿವಾಸ ಪ್ರಸಾದ್ ಗೈರು!!!

ಮೈಸೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಅವರನ್ನು ಶನಿವಾರ ಭೇಟಿಯಾಗಿ ಚರ್ಚಿಸಿರುವುದು ಕುತೂಹಲ ಮೂಡಿಸಿದೆ.

ಮೈಸೂರಿನಲ್ಲಿರುವ ಜಯಲಕ್ಷ್ಮಿ ಪುರಂ ನಲ್ಲಿರುವ ಬಿಜೆಪಿ ಸಂಸದ ವಿ. ಶ್ರೀನಿವಾಸ ಪ್ರಸಾದ್ ಮನೆಗೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಿದ್ದು, ಕಾಂಗ್ರೆಸ್‌ಗೆ ಬಿಜೆಪಿಯ ಪ್ರಭಾವಿ ದಲಿತ ನಾಯಕನ ಬೆಂಬಲ ಪಡೆಯುವ ಪ್ರಯತ್ನ ಮಾಡಿದ್ದಾರೆ ಎನ್ನಲಾಗಿದೆ.

ಲೋಕಸಭಾ ಚುನಾವಣೆ ಹೊಸ್ತಿಲಲ್ಲಿ, ಮುನಿಸು ಮರೆತು ಪ್ರಸಾದ್ ಅವರನ್ನು ಭೇಟಿಯಾಗಿ ರುವುದು ಚರ್ಚೆಗೆ ಕಾರಣವಾಗಿದೆ. ಉಭಯ ನಾಯಕರು ಅರ್ಧ ಗಂಟೆಗೂ ಹೆಚ್ಚು ಕಾಲ ಚರ್ಚಿಸಿದರು. ಈ ಚುನಾವಣ'ಯಲ್ಲಿ ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಸುನೀಲ್ ಬೋಸ್ ಅವರನ್ನು ಬೆಂಬಲಿಸುವಂತೆ ಕೋರಿದರು ಎಂದು ತಿಳಿದುಬಂದಿದೆ. ಈ ಬಗ್ಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ನಾನು ಹಾಗೂ ಪ್ರಸಾದ್ ದೀರ್ಘಕಾಲದಿಂದ ಸ್ನೇಹಿತರು. ಜೊತೆಯಲ್ಲೇ ರಾಜಕಾರಣ ಮಾಡಿದವರು.

ರಾಜಕೀಯವಾಗಿ ನಾನು ಕಾಂಗ್ರೆಸ್‌ನಲ್ಲಿದ್ದೆ, ಅವರು ಬಿಜೆಪಿಗೆ ಹೋಗಿದ್ದರು. ಅವರೀಗ ರಾಜಕೀಯದಿಂದ ನಿವೃತ್ತರಾಗಿ ದ್ದಾರೆ. ಹೀಗಾಗಿ ಅವರನ್ನು ಭೇಟಿ ಯಾಗಲು ಹಾಗೂ ಆರೋಗ್ಯ ವಿಚಾರಿಸಲು ಭೇಟಿಯಾಗಿದ್ದೆ ಎಂದು ತಿಳಿಸಿದರು.ನಾನು ಯಾವ ಪಕ್ಷಕ್ಕೂ ಬೆಂಬಲಕೊಡುವುದಿಲ್ಲ ಎಂದು ಹೇಳಿದ್ದಾರೆ. ಆದ್ದರಿಂದ ಅವರಿಂದ ರಾಜಕೀಯವಾಗಿ ಬೆಂಬಲ ಕೋರುವುದರಲ್ಲಿ ಅರ್ಥವಿಲ್ಲ. ಹೀಗಾಗಿ ರಾಜಕೀಯವಾಗಿ ಏನನ್ನೂ ಚರ್ಚೆ ಮಾಡಿಲ್ಲ. ಆದರೆ, ಕಾಂಗ್ರೆಸ್ ಬಗ್ಗೆ ಅನುಕಂಪವಿರಲಿ ಎಂದು ಕೇಳಿಕೊಂಡಿದ್ದೇನೆ ಎಂದು ತಿಳಿಸಿದರು.

ಬಳಿಕ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಶ್ರೀನಿವಾಸ ಪ್ರಸಾದ್, ನಾಳೆ (ಏ.14) ಮೈಸೂರಿನಲ್ಲಿ ನಡೆಯಲಿರುವ ಮೋದಿ ಸಮಾವೇಶಕ್ಕೆ ಆಹ್ವಾನ ಬಂದಿಲ್ಲ, ಬರುವುದೂ ಇಲ್ಲ. ಕರೆದಿಲ್ಲ, ಕರೆಯುವುದೂ ಇಲ್ಲ. ನಾನು ಹೋಗುವುದೂ ಇಲ್ಲ ಎಂದು ಹೇಳಿದರು. ಸಿದ್ದರಾಮಯ್ಯ ಜೊತೆ ರಾಜಕೀಯದ ಚರ್ಚೆ ನಡೆದಿಲ್ಲ. ಅವರ ಭೇಟಿ ನನಗೆ ಸಹಜವಾಗಿಯೇ ಖುಷಿ ಕೊಟ್ಟಿದ್ದೆ. ಅವರು ನನ್ನ ಬೆಂಬಲ ಕೇಳಿದ್ದಾರೆ. ನಾನು ರಾಜಕೀಯವಾಗಿ ನಿವೃತ್ತಿಯಾಗಿದ್ದೇನೆ ಎಂದು ಹೇಳಿದ್ದೇನಷ್ಟೆ.

ಚಾಮರಾಜ ನಗರದಲ್ಲಿ ಕಾಂಗ್ರೆಸ್‌ಗೆ ಉತ್ತಮ ವಾದ ವಾತಾವರಣ ಇದೆ ಎಂದು ಹೇಳಿದರು. ಶ್ರೀನಿವಾಸ ಪ್ರಸಾದ್ ಅವರ ಬೆಂಬಲ ನಮಗಿದೆ ಎಂದು ಚಾಮರಾಜನಗರ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಬಹಿರಂಗ ಹೇಳಿಕೆ ನೀಡಿದ್ದು, ಸಹಜವಾಗಿ ಬಿಜೆಪಿಯಲ್ಲಿ ತಳಮಳ ಸೃಷ್ಟಿಸಿದೆ. ಚಾಮರಾಜ ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಸುನೀಲ್ ಬೋಸ್, ಶ್ರೀನಿವಾಸ ಪ್ರಸಾದ್ ಅವರ ಸಂಪೂರ್ಣ ಬೆಂಬಲ ಕಾಂಗ್ರೆಸ್‌ಗೆ ಇದೆ. ಬಿಜೆಪಿ ಸಂಸದರ ಆಶೀರ್ವಾದ ಪಡೆದಿದ್ದೇನೆ. ಗೆದ್ದು ಬಾ ಎಂದು ನನಗೆ ಆಶೀರ್ವಾದ ಮಾಡಿದ್ದಾರೆ. ಅವರ ಬೆಂಬಲಿಗರು ಕೂಡ ಕಾಂಗ್ರೆಸ್ ಸೇರಿದ್ದಾರೆ. ನಮ್ಮ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಪಿಯುಸಿ ಸಾಧನೆ

ಧಾರವಾಡ ಏಪ್ರಿಲ್ : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಲ್ಲಿ 2024-25 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳ ವಿವರ ಇಂತಿದೆ.

ಪಿ.ಹೆಚ್. ಕ್ಯೂ. ಆವರಣದ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ ವಿದ್ಯಾರ್ಥಿನಿ ಪೂಜಾ ಕರಮಳಿ ವಿಜ್ಞಾನ ವಿಭಾಗದಲ್ಲಿ ಶೇ.97.83 % ಅಂಕಗಳನ್ನು ಪಡೆದಿದ್ದಾಳೆ. ಕೆ.ಸಿ.ಡಿ. ಆವರಣದ ವಿಭಜಿತ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯದ ವಿದ್ಯಾರ್ಥಿನಿ ಕಮಲಾಕ್ಷಿ ಲಮಾಣಿ ಕಲಾ ವಿಭಾಗದಲ್ಲಿ ಶೇ 97.16% ಅಂಕಗಳನ್ನು ಪಡೆದಿದ್ದಾಳೆ. ಕುಂದಗೋಳ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ ವಿದ್ಯಾರ್ಥಿನಿ ನಾಗಮ್ಮ ಕಳ್ಳಿಮನಿ ಕಲಾ ವಿಭಾಗದಲ್ಲಿ ಶೇ.95.83% ಅಂಕಗಳನ್ನು ಪಡೆದಿದ್ದಾಳೆ. ನವಲಗುಂದ ಹೆಬ್ಬಾಳ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯದ ವಿದ್ಯಾರ್ಥಿನಿ ಸೃಷ್ಟಿ ಯರಗಟ್ಟಿ ಕಲಾ ವಿಭಾಗದಲ್ಲಿ ಶೇ. 95.00% ಅಂಗಳನ್ನು ಪಡೆದ ಈ ವಿದ್ಯಾರ್ಥಿಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಗೋಪಾಲ ಲಮಾಣಿ ಹಾಗೂ ತಾಲ್ಲೂಕು ಕಲ್ಯಾಣಾಧಿಕಾರಿಗಳು, ನಿಲಯ ಪಾಲಕರು ಅಭಿನಂದಿಸಿದ್ದಾರೆ.

# ಏಪ್ರಿಲ್ 15 ರಂದು ಲೋಕಸಭಾ ಚುನಾವಣೆಯ ಪ್ರಯುಕ್ತ ಓಪನ್ ಡ್ರಾಯಿಂಗ್ ಸ್ಪರ್ಧೆ


ಧಾರವಾಡ ಏಪ್ರಿಲ್ : ಸಾರ್ವತ್ರಿಕ ಲೋಕಸಭಾ ಚುನಾವಣೆ-2024 ರ ಪ್ರಯುಕ್ತ ಜಿಲ್ಲಾ ಮಟ್ಟದ ಸ್ವೀಪ್ ವತಿಯಿಂದ ಓಪನ್ ಡ್ರಾಯಿಂಗ್ ಸ್ಪರ್ಧೆಯನ್ನು ಏಪ್ರಿಲ್ 15, 2024 ರಂದು ಬೆಳಿಗ್ಗೆ 7 ರಿಂದ 9 ಗಂಟೆಯವರೆಗೆ ಧಾರವಾಡದ ಕಿತ್ತೂರ ರಾಣಿ ಚೆನ್ನಮ್ಮ ಉದ್ಯಾನವನದಲ್ಲಿ ಆಯೋಜಿಸಲಾಗಿದೆ. ಚಿತ್ರಕಲೆ ಸ್ಪರ್ಧೆಯಲ್ಲಿ ಆಸಕ್ತಿಯಿರುವ 18 ವರ್ಷ ಮೇಲ್ಪಟ್ಟ ಎಲ್ಲ ವಿದ್ಯಾರ್ಥಿಗಳು, ನೌಕರರು, ಸಿಬ್ಬಂದಿಗಳು ಹಾಗೂ ಸಾರ್ವಜನಕರು ಭಾಗವಹಿಸಬಹುದು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಆಗಿರುವ ಸ್ವರೂಪ ಟಿ.ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎನ್‌ಡಿಎ ಜೊತೆಗೆ ಜೆಡಿಎಸ್ ಸೇರಿರುವುದು ರಾಜ್ಯದಲ್ಲಿ ಸಂಚಲನ ಮೂಡಿಸಿದೆ: ಕೇಂದ್ರ ಸಚಿವ ಭಗವಂತ ಖೂಬಾ

ಬೀದರ್ : ಎನ್‌ಡಿಎ ನಲ್ಲಿ ಜನತಾದಳ (ಜೆಡಿಎಸ್) ಸೇರಿಕೊಂಡಿರುವುದರಿಂದ ಕರ್ನಾಟಕದಲ್ಲಿ ವಿಶೇಳ ಸಂಚಲನ ಮೂಡಿಸಿದೆ. ಅದು ದೇಶಕ್ಕಾಗಿ, ದೇಶದ ಜನರ ಒಳಿತಿಗಾಗಿ ಕೆಲಸ ಮಾಡುತ್ತದೆ ಎಂದು ಕೇಂದ್ರ ಸಚಿವರು, ಬೀದರ್ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿಯಾಗಿರುವ ಭಗವಂತ ಖೂಬಾರವರು ಹೇಳಿದರು. ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರ ನಿವಾಸದ ಆವರಣದಲ್ಲಿ ಬೀದರ್ ಲೋಕಸಭಾ ಚುನಾವಣೆ ನಿಮಿತ್ಯವಾಗಿ ಶುಕ್ರವಾರ ನಡೆದ ಜನತಾದಳ (ಜಾತ್ಯಾತೀತ) ಪಕ್ಷದ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಮುಖಂಡರ ಹಾಗೂ ಕಾರ್ಯಕರ್ತರ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮೋದಿಯವರು ವಿಶ್ವನಾಯಕರಾಗಿದ್ದಾರೆ. ಅವರು ಯಾವುದೇ ಜಾತಿ, ಧರ್ಮಕ್ಕಾಗಿ ಯೋಜನೆ ರೂಪಿಸಿಲ್ಲ. ದೇಶದ ಒಳಿತಿಗಾಗಿ ಯೋಜನೆಗಳನ್ನು ರೂಪಿಸಿದ್ದಾರೆ. ಕಿಸಾನ್ ಸಮ್ಮಾನ್, ಪ್ರಧಾನಮಂತ್ರಿ ಮುದ್ರಾ ಯೋಜನೆ ಸೇರಿದಂತೆ ಅನೇಕ ಯೋಜನೆಗಳಿಂದ ರಾಜ್ಯದ ಜನತೆಯ ಬದುಕು ಸುಧಾರಣೆಯಾಗಿದೆ. ಬೀದರ್ ಲೋಕಸಭಾ ಕ್ಷೇತ್ರದಲ್ಲಿ ನಾನು ಕೂಡ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದೇನೆ.

ಕಾಂಗ್ರೆಸ್ ನವ್ರು ಕಳೆದ 65 ವರ್ಷಗಳಿಂದ ದರ್ಪದ ರಾಜಕೀಯ ಮಾಡಿಕೊಂಡು ಬಂದಿದ್ದಾರೆ. ಭಾಲ್ಕಿಯಲ್ಲಿ ಮಕ್ಕಳಿಗೆ ಆಟ ಆಡಲು ಸ್ಟೇಡಿಯಂ ಕೂಡ ತಂದಿಲ್ಲ. ಬೀದರ್ ಹಿಂದುಳಿದಿದೇ ಎಂದರೇ ಅದಕ್ಕೆ ಈಶ್ವರ್ ಖಂಡ್ರೆ ಮತ್ತು ಖಂಡ್ರೆ ಪರಿವಾರವೇ ಕಾರಣವಾಗಿದೆ. ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಬಿಜೆಪಿ, ಜೆಡಿಎಸ್ ಮುಖಂಡರು,



ಕಾರ್ಯಕರ್ತರಲ್ಲಿ ಸಣ್ಣಪುಟ್ಟ ವ್ಯತ್ಯಾಸಗಳು, ಗೊಂದಲಗಳು ಇದ್ದಲ್ಲಿ ಅವುಗಳನ್ನು ಸರಿ ಪಡಿಸಿಕೊಂಡು ಒಟ್ಟಾಗಿ ಕೆಲಸ ಮಾಡಬೇಕು. ಈ ಕ್ಷೇತ್ರದಲ್ಲಿ ಒಂದು ಲಕ್ಷಕ್ಕೂ ಹೆಚ್ಚಿನ ಲೀಡ್ ಕೊಡಬೇಕು ಎಂದು ಕೇಂದ್ರ ಸಚಿವ ಭಗವಂತ ಖೂಬಾರವರು ಮನವಿ ಮಾಡಿದರು.

ಇದೇ ವೇಳೆ ಮಾತನಾಡಿದ ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು, ಬೀದರ್ ಜಿಲ್ಲೆಯ ಇತಿಹಾಸದಲ್ಲಿಯೇ ಮೊಟ್ಟಮೊದಲ ಬಾರಿಗೆ ಭಗವಂತ ಖೂಬಾರವರು ಕೇಂದ್ರ ಸಚಿವರಾಗಿದ್ದಾರೆ. ಸಚಿವರಾದ ಬಳಿಕ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಅವರು ಮಾಡಿದ್ದಾರೆ. ಅವರನ್ನು ಮತ್ತೊಮ್ಮೆ ಗೆಲ್ಲಿಸುವ ಮೂಲಕ ಲೋಕಸಭೆಗೆ ಕಳುಹಿಸಿ ಕೊಡುವ ಕೆಲಸವನ್ನು ನಾವೆಲ್ಲರೂ ಸೇರಿ ಮಾಡಬೇಕಾಗಿದೆ ಎಂದು ಮುಖಂಡರಿಗೆ, ಕಾರ್ಯಕರ್ತರಿಗೆ ತಿಳಿಸಿದರು.

ನಾವು ಈ ಹಿಂದೆ ಕಾಂಗ್ರೆಸ್ ಜೊತೆಗೆ ಮೈತ್ರಿ ಮಾಡಿಕೊಂಡಿದ್ದೇವು. ಆಗ ನಮಗೆ ಅಷ್ಟೊಂದು ಬೆಂಬಲ ಇರಲಿಲ್ಲ. ಈಗ ನಾವು ಬಿಜೆಪಿ ಜೊತೆಗೆ ಮೈತ್ರಿ ಮಾಡಿಕೊಂಡಿರುವುದಕ್ಕೆ ಬಹುತೇಕರು ನಮಗೆ ಬೆಂಬಲ ಸೂಚಿಸಿದ್ದಾರೆ. ಕಳೆದ ಬಾರಿ ನಾವು ಕಾಂಗ್ರೆಸ್ ಜೊತೆಗೆ ಮೈತ್ರಿ ಮಾಡಿಕೊಂಡಿದ್ದಾಗ ನಮಗೆ ಕೆಲಸ ಮಾಡಲು ಆಗಿರಲಿಲ್ಲ. ಅದಕ್ಕಿಂತ ಮೊದಲು ಬಿಜೆಪಿ ಜೊತೆಗೆ ಮೈತ್ರಿ ಮಾಡಿಕೊಂಡಾಗ ನಾವು ಸಾಕಷ್ಟು ಕೆಲಸ ಮಾಡಿದ್ದೇವು.

ರಾಜ್ಯದ ಮತ್ತು ದೇಶದ ಒಳಿತಿಗಾಗಿ ಈ ಮೈತ್ರಿ ಅಗತ್ಯವಾಗಿದೆ. ರಾಜ್ಯದಲ್ಲಿನ ನೀರಾವರಿ ಯೋಜನೆಗಳಿಗೆ ಶಕ್ತಿ ಕೊಡುವ ಕೆಲಸ ಆಗಬೇಕಾಗಿದೆ. ಹತ್ತು ವರ್ಷಗಳ ಹಿಂದಿನ ಭಾರತ ಮತ್ತು ಈಗಿನ ಭಾರತವನ್ನು ನೋಡುವಾಗ ಸಾಕಷ್ಟು ಸುಧಾರಣೆ ಆಗಿದೆ ಎಂದು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ಹೇಳಿದರು.

ಕಾಂಗ್ರೆಸ್ ಸರ್ಕಾರದಿಂದ ಎಸ್ಸಿಪಿ, ಟಿಎಸ್ಪಿ ಅನುದಾನ ದುರ್ಬಳಕೆ:

ರಾಜ್ಯದಲ್ಲಿ ಈಗ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಎಸ್ಸಿಪಿ, ಟಿಎಸ್ಪಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಖರ್ಚು ಮಾಡುತ್ತಿದೆ. ಆ ಮೂಲಕ ಎಸ್ಸಿ, ಎಸ್ಟಿ ಜನರಿಗೆ ಮೋಸ ಮಾಡುತ್ತಿದ್ದಾರೆ. ರೈತರ ಜೀವನ ಸುಧಾರಣೆಗೆ ಕಾಂಗ್ರೆಸ್ ನವ್ರು ಏನು ಮಾಡಿದ್ದಾರೆ ಎಂಬುದನ್ನು ತಿಳಿಸಬೇಕು. ಕಾಂಗ್ರೆಸ್ ಸರ್ಕಾರದ ಬೊಕ್ಕಸದಲ್ಲಿ ದುಡ್ಡಿಲ್ಲ. ಕಾಂಗ್ರೆಸ್ ಸರ್ಕಾರ ದಿವಾಳಿಯಾಗ್ತಿದೆ. ನಾವು ಕೇಂದ್ರದಲ್ಲಿ ಅಧಿಕಾರಕ್ಕೆ ಬರಲಿಲ್ಲ ಅಂದ್ರೆ ಗ್ಯಾರಂಟಿ ಯೋಜನೆಗಳನ್ನು ಬಂದ್ ಮಾಡ್ತಿವಿ ಅಂತ ಅವರೇ ಹೇಳುತ್ತಿದ್ದಾರೆ. ಮೋದಿ ವರ್ಸಸ್ ರಾಹುಲ್ ಗಾಂಧಿ ಎಲೆಕ್ಷನ್ ನಡೆಯುತ್ತಿದೆ. ನಾವು ಈ ಲೋಕಸಭಾ ಚುನಾವಣೆಯಲ್ಲಿ ನಮ್ಮ ಎನ್‌ಡಿಎ ಅಭ್ಯರ್ಥಿಯಾಗಿರುವ ಭಗವಂತ ಖೂಬಾರವರಿಗೆ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಲಕ್ಷಕ್ಕಿಂತ ಹೆಚ್ಚಿನ ಲೀಡ್ ಕೊಡಬೇಕಾಗಿದೆ.

ಆ ನಿಟ್ಟಿನಲ್ಲಿ ಎಲ್ಲರೂ ಕೆಲಸ ಮಾಡಬೇಕು ಎಂದು ಜೆಡಿಎಸ್ ಪಕ್ಷದ ಮುಖಂಡರಿಗೆ, ಕಾರ್ಯಕರ್ತರಿಗೆ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ತಿಳಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ರಮೇಶ್ ಪಾಟೀಲ್ ಸೋಲ್ಪೂರ್, ಜೆಡಿಎಸ್ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಸಂಜುರೆಡ್ಡಿ ನಿರ್ಣಾ, ರಾಜು ಕಾಡ್ಯಾಳ, ಶಾಂತಲಿಂಗ ಸಾವಳಗಿ, ದೇವೇಂದ್ರ ಸೋನಿ, ಸಜ್ಜದ್ ಸಾಹೇಬ್, ರಾಜಶೇಖರ ಜವಳೆ, ರಾಜು ಚಿಂತಾಮಣಿ, ಸಂತೋಷ ರಾಸೂರೆ, ವಿಜಯಕುಮಾರ್ ಖಾಶೆಂಪುರ್, ಬಸವರಾಜ ಹೆಡೆ, ಮಲ್ಲಿಕಾರ್ಜುನ ನೆಳ್ಗೆ, ಸಿದ್ರಾಮಪ್ಪ ಹೊಂಕೆ, ಶಿವರಾಜ ಹುಲಿ, ಜಗನಾಥರೆಡ್ಡಿ ನಿರ್ಣಾ, ಶಿವಕುಮಾರ್ ಪವಾರ್, ನಾರಾಯಣ್ ರೋಲ್ಯಾಕ್ಸ್ ಸೇರಿದಂತೆ ಅನೇಕರಿದ್ದರು.